383 (849) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಪ್ರವಾಸೋದ್ಯಮ ಮತ್ತು ಮೂ,ಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕು ಸಿ ಎನ್ ದುರ್ಗ ಹೋಬಳಿಯ 'ಸಿದ್ದರ ಬೆಟ್ಟದಲ್ಲಿ' ಔಷಧಿ ಗಿಡಮೂಲಿಕೆಗಳು ಮತ್ತು ಪ್ರಾಚೀನಗುಹೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಸಿದ್ದರಬೆಟ್ಟ ಮಣ್ಯ ಕ್ಷೇತ್ರವಾಗಿದ್ದು, ಹೆಚ್ಚು ಹೆಚ್ಚು ಪ್ರವಾಸಿಗರನ್ನು ಆಕರ್ಷಿಸುತ್ತಿರುವುದು ನಿಜವಲ್ಲವೇ,

ಇ) ಹಾಗಿದ್ದಲ್ಲಿ ಬರುವ ಪ್ರವಾಸಿಗರ ಅನುಕೂಲಕ್ಕಾಗಿ ರಸ್ತೆ ಪ್ರವಾಸಿಗರ ಅನುಕೂಲಕ್ಕಾಗಿ ರಸ್ತೆ, ಪ್ರವಾಸಿ ಮಂದಿರ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ, ಹಾಗಿದ್ದಲ್ಲಿ ಈ ಸೌಲಭ್ಯಗಳನ್ನು ಯಾವಾಗ ಮೂರೈಸಲಾಗುವುದು?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು,

ಆ) ಹೌದು,

ಇ) ಪ್ರವಾಸೋದ್ಯಮ ಇಲಾಖೆಯು ಸಿದ್ದರಬೆಟ್ಟದಲ್ಲಿ ರೂ 65 00 ಲಕ್ಷಗಳ ವೆಚ್ಚದಲ್ಲಿ ಬೆಟ್ಟಕ್ಕೆ ಮೆಟ್ಟಿಲು ಸೌಲಭ್ಯ ಹಾಗೂ ಡಾರ್ಮೆಟರಿ ನಿರ್ಮಾಣ ಇತ್ಯಾದಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಈ ಬಗ್ಗೆ ಈಗಾಗಲೇ ಅಂದಾಜು ಪಟ್ಟಿಯನ್ನು ತಾಂತ್ರಿಕ ಪರಿಶೀಲನೆಗಾಗಿ ಲೋಕೋಪಯೋಗಿ ಇಲಾಖೆಗೆ ನಲ್ಲಿಸಲಾಗಿದೆ

384 (667) ಡಾ ಮಹಾದೇವಪ್ಪ ಹೆಚ್ ಸಿ (ಟಿ ನರಸೀಪುರ) ವಿಧಾನ ಸಭಾ ಸದಸ್ಯರು ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯ ಕಂಬಾಲದಲ್ಲಿ ಕಂಬಾಲಪಲ್ಲಿ ಗ್ರಾಮದಲ್ಲಿ ನಡೆದ ದಲಿತರ ನರಮೇಧ ಪ್ರಕರಣದ ಸಂಬಂಧ ನ್ಯಾಯಾಲಯವು ನೀಡಲಾಗಿರುವ ತೀರ್ಪಿನಿಂದ ಆಪಾದಿತರೆಲ್ಲರೂ ನಿರ್ದೋಷಿಗಳಾಗಿರುವುದು ನಿಜವಲ್ಲವೇ,

ಆ) ಸಾಕ್ಷಾಧ್ಯಾರಗಳನ್ನು ನೀಡುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವಲ್ಲದೆ,

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಂ ಪಿ ಪ್ರಕಾಶ್, (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ನಿಜ ಆದರೆ ಸದರಿ ಪ್ರಕರಣದಲ್ಲಿ ಸರ್ಕಾರವು ಕರ್ನಾಟಕ ಉಚ್ಚ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿ ಈಗಾಗಲೇ ದಿನಾಂಕ 16 1 2007 ರಂದು ಆದೇಶ ಹೊರಡಿಸಿದೆ

ಆ) ನಿಜವಲ್ಲ ಸಾಕ್ಷಿಗಳಿಂದ ಒತ್ತಾಯ ಪೂರ್ವಕವಾಗಿ ಅಥವಾ ಭಯಪಡಿಸಿ ಹೇಳಿಕೆ ಪಡೆಯುವುದು ಸರ್ಕಾರದ ನೀತಿಯಲ್ಲ

ಇ) ಸದರಿ ಪ್ರಕರಣದಲ್ಲಿ ಈಗಾಗಲೇ ಸರ್ಕಾರವು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಕ್ರಮ ಕೈಗೊಂಡಿದೆ

385 (171) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬ (ಬಸವಕಲ್ಯಾಣ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂಗನವಾಡಿ ಕಾರ್ಯಕತಯರಿಗೆ ಕಳೆದ ಎರಡು ವರ್ಷಗಳಿಂದ ಕೊಡುತ್ತಿರುವ ಮಾಸಿಕ ವೇತನವೆಷ್ಟು,

ಆ) ಇಂದಿನ ದಿನಗಳಲ್ಲಿ ಈ ವೇತನದಲ್ಲಿ ಜೀವನ ನಡೆಸಲು ಕಷ್ಟಕರವಾಗಿದ್ದು ಈ ವೇತನದ ಪ್ರಮಾಣವನ್ನು ಹೆಚ್ಚುಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಇ) ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಹೆಚ್ ಕೆ ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) .

ಅ) ಕಳೆದ ಎರಡು ವರ್ಷಗಳಿಂದ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದ ವತಿಯಿಂದ ಮಾಹೆಯಾನ ರೂ 1,000/ ಹಾಗೂ ಸಹಾಯಕಿಯರಿಗೆ ರೂ 500/– ನೀಡಲಾಗುತ್ತಿದೆ ಮತ್ತು ರಾಜ್ಯ ಸರ್ಕಾರದ ವತಿಯಿಂದ 2005–06ರವರೆಗೆ ಕಾರ್ಯಕರ್ತೆಯರಿಗೆ ರೂ 450/– ಹಾಗೂ ಸಹಾಯಕಿಯರಿಗೆ ರೂ 225/– ನೀಡುತ್ತಿದ್ದು, 2006–07ನೇ ಸಾಲಿನಲ್ಲಿ ಈ ಮೊತ್ತವನ್ನು ಅನುಕ್ರಮವಾಗಿ 550/– ಹಾಗೂ 275/–ಕ್ಕೆ ಹೆಚ್ಚಿಸಿರುತ್ತದೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ತ್ರೀಶಕ್ತಿ ಗುಂಪುಗಳನ್ನು ರಚಿಸಲು ಭಾಗ್ಯಲಕ್ಷ್ಮೀ ಯೋಜನೆಯಡಿ ಫಲಾನುಭವಿಗಳನ್ನು ಗುರುತಿಸಲು ಮತ್ತು ಮುಂದಿನ ಕ್ರಮವನ್ನು ಕೈಗೆತ್ತಿಕೊಳ್ಳಲು ಹಾಗೂ ಆರೋಗ್ಯ ಇಲಾಖೆಯ ರೋಗ ನಿರೋಧಕ